

ಅರುಣ ಪಿ. ಭಟ್ಟ

## ವಾರಭವಿಷ್ಯ: 07.03.2024ರಿಂದ 13.03.2024ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ಉದ್ಯೋಗಕ್ಕೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಬೇರೆ ಕಡೆ ನಿಮ್ಮನ್ನು ಕೆಲಸಕ್ಕೆ ನಿಯೋಜನೆ ಮಾಡಬಹುದು. ಸವಾಲೊಂದು ಹೊಸ ಸ್ಥಳದಲ್ಲಿ ಪ್ರಗತಿಗೆ ಪ್ರೇರಣೆ ನೀಡುತ್ತದೆ. ಆದರೂ ನಿಮ್ಮ ಪಾಲಿಗೆ ಯಶಸ್ಸು ಇರುತ್ತದೆ. ಶುಭದಿನ 11. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಕುಟುಂಬದ ಬಗ್ಗೆ ಹೆಮ್ಮೆಪಡುವಂತಹ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 10. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯವಹಾರಗಳನ್ನು ಬಲಪಡಿಸಲು ಹೆಚ್ಚು ಶ್ರಮ ಹಾಕಲಿದ್ದೀರಿ. ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಇದೆ. ಇನ್ನು ವಾರದ ದ್ವಿತೀಯಾರ್ಧದಲ್ಲಿ ವೈವಾಹಿಕ ಜೀವನವು ಸಂತೋಷವಾಗಿರುತ್ತದೆ. ನಿಮ್ಮ ಕೆಲಸವನ್ನು ಹೆಚ್ಚು ವೇಗದಿಂದ ಮಾಡಲಿದ್ದೀರಿ. ಶುಭದಿನ 12. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಮಕ್ಕಳ ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ಆದಾಯ ಮೂಲಗಳನ್ನು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದು, ಅದರಿಂದ ಅನುಕೂಲ ಆಗುತ್ತದೆ. ಪ್ರೀತಿ ಪ್ರೇಮ ಸಂಬಂಧದಲ್ಲಿ ತೊಡಗಿರುವವರು ಸುಮಧುರವಾದ ಅನುಭವವನ್ನು ಪಡೆಯಲಿದ್ದೀರಿ. ನಿಮ್ಮ ಉತ್ಸಾಹದಾಯಕ ಸ್ವಭಾವವು ಸಂತಸವಾದ ವಾತಾವರಣವನ್ನು ಸೃಷ್ಟಿ ಮಾಡುತ್ತದೆ. ಶುಭದಿನ 11. ಹನುಮಾನ್ ಚಾಲಿಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಕೆಲಸದಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಆ ಮೂಲಕ ತುಂಬ ವೇಗವಾಗಿ ಕೆಲಸಗಳನ್ನು ಪೂರೈಸಲು ಸಾಧ್ಯವಾಗುತ್ತದೆ. ಶುಭದಿನ 09. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಈ ವಾರ ನೀವು ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 13. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜೊತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಇದು ಒತ್ತಡವಾಗಿ ಪರಿಣಮಿಸಬಹುದು. ಶುಭದಿನ 09. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ಸಿಗುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ವ್ಯಾಪಾರಕ್ಕೆ ಸಂಬಂಧಿಸಿದ ಪ್ರಮುಖ ಕೆಲಸ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಶುಭದಿನ 12. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ನಿಮ್ಮ ಕೆಲಸ–ಕಾರ್ಯಗಳನ್ನು ಪೂರ್ಣಗೊಳಿಸಲು ಸಜ್ಜಾಗುತ್ತೀರಿ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಹೆಚ್ಚಿನ ಹಣ ಖರ್ಚಾಗಲಿದೆ. ಹಣ ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ವಾರದ ಅಂತ್ಯದಲ್ಲಿ ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ಶುಭದಿನ 11. ವಿಷ್ಣು ಸಹಸ್ರನಾಮ ಪಠಿಸಿರಿ.




ಜೀವನ ಮಟ್ಟ ಉತ್ತಮಗೊಳ್ಳಲಿದೆ. ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಸಂಗಾತಿಯ ಭಾವನೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಶುಭದಿನ 10. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ಮಾನಸಿಕ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ವೈಯಕ್ತಿಕ ಬದುಕು ಸಂತಸದಾಯಕವಾಗಿ ಇರುತ್ತದೆ. ಶುಭದಿನ 09. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ವಾರದ ಮೊದಲ ಭಾಗದಲ್ಲಿ ನಿಮಗೆ ಕೆಲವೊಂದು ಚಿಂತೆ ಕಾಡುತ್ತವೆ. ವಾರದ ದ್ವಿತೀಯಾರ್ಧದಲ್ಲಿ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ. ಆ ಮೂಲಕ ಕೆಲಸ– ಕಾರ್ಯಗಳನ್ನು ಇನ್ನೂ ವೇಗವಾಗಿ ಮಾಡಲು ಸಾಧ್ಯವಾಗುತ್ತದೆ. ನಿಮ್ಮ ಜವಾಬ್ದಾರಿಗಳನ್ನು ಪೂರೈಸಲು ಹೆಚ್ಚು ಸಮಯವನ್ನು ಮೀಸಲಿಡುತ್ತೀರಿ. ಶುಭದಿನ 13.. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.